ಬುಧವಾರ 24-09-2025 ಬೆಂಗಳೂರು ಬೆಲೆ: 5ರೂ, 4ಪಟಗಳು ಸಂಪುಟ 01-ಸಂಚಿಕೆ 60

Digital Varthe Kannada Daily Volume 01 - Issue 60 Wednesday 24-09-2025 Price: 5/- Rs 2 Pages Bengalore

DIGITAL VARTHE

www.digitalvarthe.com
digitalvarthe@gmail.com

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

RNI:KNKAN/25/A1348

ಕನ್ನಡ ದಿನಪತ್ರಿಕೆ

## ಸೆ 26 ರಿಂದ 5 ದಿನಗಳ ಕಾಲ ಕೆಆರ್‌ಎಸ್‌ನಲ್ಲಿ ಕಾವೇರಿ ಆರತಿ

ಬೆಂಗಳೂರು: ಕನ್ನಡ ನಾಡಿನ ಜೀವನದಿ "ಕಾವೇರಿ ಆರತಿ" ಎಂಬ ಐದು ದಿನಗಳ ಭವ್ಯ ಕಾರ್ಯಕ್ರಮವು ಕೆಆರ್ ಎಸ್ ನಲ್ಲಿ ಸೆಪ್ಟೆಂಬರ್ 26 ರಿಂದ ಆಯೋಜನೆಯಾಗಿದೆ. ಶುಕ್ರವಾರ ಸಾಯಂಕಾಲ 5 ಗಂಟೆಗೆ ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಜಲ ಸಂಪನ್ಮೂಲ ಸಚಿವರಾದ ಡಿ.ಕೆ.ಶಿವಕುಮಾರ್ ಅವರು ಕಾವೇರಿ ನದಿಗೆ ಪುಷ್ಪಾರ್ಚನೆ ಮಾಡುವ ಮೂಲಕ "ಕಾವೇರಿ ಆರತಿ" ಕಾರ್ಯಕ್ರಮಕ್ಕೆ ಶಾಸ್ತ್ರೋಕ್ತವಾಗಿ ಚಾಲನೆ ನೀಡಲಿದ್ದಾರೆ ಎಂದು ಜಿಲ್ಲಾ ಉಸ್ತುವರಿ ಸಚಿವ ಎನ್. ಚೆಲುವರಾಯಸ್ವಾಮಿ ಮಾಹಿತಿ ನೀಡಿದ್ದಾರೆ.



ಪತ್ರಿಕಾ ಹೇಳಿಕೆ ನೀಡಿರುವ ಅವರು, ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಸುತ್ತೂರು ವೀರ ಸಿಂಹಾಸನ ಮಹಾ ಸಂಸ್ಥಾನ ಮಠಾಧ್ಯಕ್ಷರಾದ ಶ್ರೀ ಡಾ. ಶಿವರಾತ್ರಿ ದೇಶಿಕೇಂದ್ರ ಮಹಾ ಸ್ವಾಮೀಜಿ, ಸಿದ್ಧಗಂಗಾ ಮಠದ ಅಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿ, ವಿಶ್ವ ಒಕ್ಕಲಿಗ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿ, ಕೃಷಿ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಚಲುವರಾಯಸ್ವಾಮಿ, ಮಂಡ್ಯ ಜಿಲ್ಲೆಯ ಶಾಸಕರುಗಳಾದ ರಮೇಶ್ ಬಾಬು ಬಂಡಿಸಿದ್ದೇಗೌಡ, ನರೇಂದ್ರಸ್ವಾಮಿ, ರವಿಕುಮಾರ್ ಗಣಿಗ, ಕೆ.ಎನ್.ಉದಯ್, ದರ್ಶನ್ ಪುಟ್ಟಣ್ಣಯ್ಯ, ಮಧು ಮಾದೇಗೌಡ, ದಿನೇಶ್ ಗೂಳಿಗೌಡ ಸೇ-ರಿದಂತೆ ಜಿಲ್ಲೆಯ ಜನಪ್ರತಿನಿಧಿಗಳು, ನೀರಾವರಿ ನಿಗಮದ ಅಧಿಕಾರಿಗಳು ಪಾಲ್ಗೊಳ್ಳುವರು.

ಹಿನ್ನೆಲೆ: ಕೊಡಗಿನಲ್ಲಿ ಹುಟ್ಟಿ, ಕೃಷ್ಣರಾಜ ಸಾಗರದಲ್ಲಿ ನಿಂತು ಮಂಡ್ಯ, ಮೈಸೂರು, ಬೆಂಗಳೂರು ದಕ್ಷಿಣ ಜಿಲ್ಲೆಗೆ ಕುಡಿಯುವ ನೀರು, ಲಕ್ಷಾಂತರ ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಚಟುವಟಿ-ಕೆಗಳಿಗೆ ಆಧಾರವಾಗಿರುವ ಕಾವೇರಿ ನದಿ, ತಮಿಳುನಾಡಿನ ಲಕ್ಷಾಂತರ ಹೆಕ್ಟೇರ್ ಪ್ರದೇಶದಲ್ಲಿ ಬೇಸಾಯ ಹಾಗೂ ಕುಡಿಯುವ ನೀರಿಗೆ ಕಾರಣೀಭೂತವಾಗಿ ಪಾಂಡಿಚೇರಿ ಮುಖಾಂತರ ಅರಬ್ಬಿ ಸಮುದ್ರದಲ್ಲಿ ಲೀನವಾಗುತ್ತದೆ. ಗಂಗೆಯಷ್ಟೇ ಪಾವಿತ್ರ್ಯ ಹೊಂದಿರುವ ಕಾವೇರಿ ನದಿಗೆ ಕಾವೇರಿ ಆರತಿ ಮಾಡಿ ಭಕ್ತಿ ಭಾವದಿಂದ ನಮಿಸಿ ಪೂಜಿಸಬೇಕೆಂಬುದು ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರ ಕನಸಾಗಿತ್ತು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ 2024ರಲ್ಲಿ ಕೆಆರ್ ಎಸ್ ನಲ್ಲಿ ಕಾವೇರಿಗೆ ಬಾಗಿನ ಅರ್ಪಿಸುವ ಸಂದರ್ಭದಲ್ಲಿ ಡಿಸಿಎಂ ಅವರು ಈ ವಿಷಯವನ್ನು ಘೋಷಣೆ ಮಾಡಿದ್ದರು.

ಅದರಂತೆ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಚಲುವರಾಯಸ್ವಾಮಿ ಅವರ ನೇತೃತ್ವದ ಶಾಸಕರ ನಿಯೋಗ ವಾರಣಾಸಿ ಮತ್ತು ಹರಿದ್ವಾರಕ್ಕೆ ಭೇಟಿ ನೀಡಿ ಗಂಗಾರತಿಯನ್ನು ವೀಕ್ಷಿಸಿ ಸರ್ಕಾರಕ್ಕೆ ವರದಿ ನೀಡಿತ್ತು. ಆ ಪ್ರಕಾರ ಸರ್ಕಾರ ಕಾವೇರಿ ಆರತಿ ಮಾಡಲು ತೀರ್ಮಾನಿಸಿ, ಸುಮಾರು 10 ಸಾವಿರ ಜನರು ಭವ್ಯ ಕಾರ್ಯಕ್ರಮ ವೀಕ್ಷಣೆ ಮಾಡಬಹುದಾದ ಬೃಹತ್ ಸ್ಟೇಡಿಯಂ ನಿರ್ಮಿಸಲು ಸಚಿವ ಸಂಪುಟ ಅನುಮೋದನೆ ನೀಡಿತು. ಈ ಬಾರಿಯ ದಸರಾದಲ್ಲಿ ಸಾಂಕೇತಿಕವಾಗಿ 5 ದಿನಗಳ ಕಾಲ ಕೆಆರ್ ಎಸ್ ನಲ್ಲಿ ಕಾವೇರಿ ತಾಯಿಗೆ ಆರತಿ ಮಾಡಲು ನಿರ್ಧರಿಸಲಾಗಿದೆ. ರಾಜ್ಯದಲ್ಲಿ ಮಳೆ, ಬೆಳೆ ಒಳ್ಳೆಯದಾಗಲಿ, ರಾಜ್ಯಕ್ಕೆ ಸನ್ಮಂಗಳವಾಗಲಿ ಎಂದು ತಾಯಿ ಕಾವೇರಿಯಲ್ಲಿ ಪೂಜೆ ಮಾಡಿ ಪ್ರಾರ್ಥಿಸಲಾಗುವುದು ಎಂದು ಸಚಿವರು ವಿವರಿಸಿದ್ದಾರೆ.

## ವಿಲಾಸಿ ಜೀವನಕ್ಕಾಗಿ 13 ದೇವಸ್ಥಾನಗಳಿಗೆ ಕನ್ನ ಹಾಕುತ್ತಿದ್ದವರ ಬಂಧನ

# 14 ಲಕ್ಷ ಮೌಲ್ಯದ ದೇವರ ಆಭರಣ ಜಪ್ತಿ

ಬೆಂಗಳೂರು: ವಿಲಾಸಿ ಜೀವನ ನಡೆಸಲು ಅರ್ಚಕನಂತೆ ದೇವರ ಗರ್ಭಗುಡಿಗೆ ಪ್ರವೇಶಿಸಿ ದೇವರ ವಿಗ್ರಹಗಳನ್ನು ಕಳವು ಮಾಡಿಕೊಂಡು ಪರಾರಿಯಾಗಿದ್ದ ಇಬ್ಬರನ್ನು ಬನಶಂಕರಿ ಠಾಣೆ ಪೊಲೀಸರು ಬಂಧಿಸಿ, 14 ಲಕ್ಷ ಮೌಲ್ಯದ 5ಕೆಜಿ ಬೆಳ್ಳಿ ವಸ್ತುಗಳು , 67 ಗ್ರಾಂ ಚಿನ್ನಾಭರಣ ಹಾಗೂ ಹಿತ್ತಾಳೆ,ತಾಮ್ರದ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.



ಶಿವಮೊಗ್ಗದ ಸಂತೋಷ್ ಅಲಿಯಾಸ್ ಕೆಜಿಎಫ್ (31) ಮತ್ತು ಹೆಬ್ಬಗೋಡಿಯ ಪ್ರವೀಣ್‌ಭಟ್ (51) ಬಂಧಿತ ಆರೋಪಿಗಳು. ಈ ಇಬ್ಬರು ದ್ವಿಚಕ್ರ ವಾಹನ ಕಳ್ಳತನ ಮಾಡಿ ಆ ವಾಹನದಲ್ಲೇ ವಿವಿಧ ದೇವಸ್ಥಾನಗಳಿಗೆ ಸುತ್ತಾಡಿ ಕಳ್ಳತನ ಮಾಡುತ್ತಿದ್ದರು ಎಂಬುವುದು ಪೊಲೀಸರ ತನಿಖೆಯಿಂದ ಗೊತ್ತಾಗಿದೆ. ಬನಶಂಕರಿ ಪೊಲೀಸ್ ಠಾಣೆ ವ್ಯಾಪ್ತಿಯ ಸಿದ್ಧಿ ಮಹಾಗಣಪತಿ ದೇವಸ್ಥಾನಕ್ಕೆ ಅರ್ಚಕನ ವೇಷದಲ್ಲಿ ಗರ್ಭಗುಡಿಗೆ ಹೋದ ವ್ಯಕ್ತಿ ದೇವರ ಮೈ ಮೇಲೆ ಇದ್ದ ಆಭರಣಗಳು, ದೀಪಾಲೆ ಕಂಬಗಳನ್ನು ಕಳವು ಮಾಡಿಕೊಂಡು ಪರಾರಿಯಾಗಿದ್ದನು.

ಈ ಬಗ್ಗೆ ದೇವಸ್ಥಾನದ ಅಧ್ಯಕ್ಷರು ದೂರು ನೀಡಿದ್ದರು. ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ ಪೊಲೀಸರು ಮಾಹಿತಿಯನ್ನು ಕಲೆಹಾಕಿ ಗೊಟ್ಟಿಗೆರೆ ಬಳಿ ದ್ವಿಚಕ್ರ ವಾಹನ ಸಮೇತ ಇಬ್ಬರನ್ನು ವಶಕ್ಕೆ ಪಡೆದು ವಿಚಾರಣೆಗೆ ಒಳಪಡಸಿದಾಗ ದೇವಸ್ಥಾನದಲ್ಲಿ ಕಳ್ಳತನ ಮಾಡಿರು ವುದಾಗಿ ತಿಳಿಸಿದ್ದಾರೆ.


ಆರೋಪಿಗಳನ್ನು ಸುದೀರ್ಘವಾಗಿ ವಿಚಾರಣೆಗೆ ಒಳಪಡಿಸಿದಾಗ, ವಿಲಾಸಿ ಜೀವನ ನಡೆಸಲು ನಗರದ ವಿವಿಧ ದೇವಸ್ಥಾನಗಳ ಬೀಗ ಮುರಿದು ದೇವರ ಮೂರ್ತಿಗೆ ತೊಡಿಸಿದ್ದ ಚಿನ್ನ, ಬೆಳ್ಳಿ ವಸ್ತುಗಳು ಹಾಗೂ ಹುಂಡಿ ಹಣ ಕಳವು ಮಾಡಿರುವುದಾಗಿ ಹೇಳಿದ್ದಾರೆ.

ಆರೋಪಿಗಳಿಬ್ಬರಿಂದ ಸುಮಾರು 14 ಲಕ್ಷ ಮೌಲ್ಯದ 5 ಕೆಜಿ ಬೆಳ್ಳಿ ವಸ್ತುಗಳು, 67 ಗ್ರಾಂ ಚಿನ್ನಾಭರಣ, 1.426 ಕೆಜಿ ಹಿತ್ತಾಳೆ ವಸ್ತುಗಳು ಹಾಗೂ 353 ಗ್ರಾಂ ತಾಮ್ರದ ವಸ್ತುಗಳು ವಶಪಡಿಸಿಕೊಳ್ಳುವಲ್ಲಿ ಇನ್?ಸಪೆಕ್ಟರ್ ಕೊಟ್ರೇಶಿ ಹಾಗೂ ಸಿಬ್ಬಂದಿ ತಂಡ ಯಶಸ್ವಿಯಾಗಿದೆ. ಆರೋಪಿಗಳಿಬ್ಬರ ಬಂಧನದಿಂದ ಬನಶಂಕರಿ ಪೊಲೀಸ್‌ಠಾಣೆಯ ಎರಡು ದೇವಸ್ಥಾನ ಕಳವು ಪ್ರಕರಣಗಳು, ಜಯನಗರ, ಸುಬ್ರಹ್ಮಣ್ಯಪುರ,ಕುಮಾರಸ್ವಾಮಿ ಲೇಔಟ್, ರಾಜರಾಜೇಶ್ವರಿ ಠಾಣೆ, ಕಾಡುಗೊಂಡನಹಳ್ಳಿ, ಕೆಂಗೇರಿ, ಸಂಪಿಗೆ ಹಳ್ಳಿ, ತಲಘಟ್ಟಪುರ, ಜಿಗಣಿ ಪೊಲೀಸ್ ಠಾಣೆಯ ತಲಾ ಒಂದು ದೇವಸ್ಥಾನ ಕಳವು ಪ್ರಕರಣಗಳು ಹಾಗೂ ಗಿರಿನಗರ ಪೊಲೀಸ್ ಠಾಣೆಯ ಎರಡು ದೇವಸ್ಥಾನ ಕಳವು ಸೇರಿ ಒಟ್ಟು 13 ಪ್ರಕರಣಗಳು ಪತ್ತೆಯಾಗಿರುತ್ತವೆ.

## ವಿಮಾನದ ಲ್ಯಾಂಡಿಂಗ್ ಗೇರ್ ಜಾಗದಲ್ಲಿ ಅಡಗಿಕೊಂಡು

# ದೆಹಲಿಗೆ ಬಂದಿಳಿದ ಅಫ್ಘಾನ್ ಹುಡುಗ

ನವದೆಹಲಿ: ವಿಮಾನದ ಲ್ಯಾಂಡಿಂಗ್ ಗೇರ್ ಜಾಗದಲ್ಲಿ ಅಡಗಿಕೊಂಡು ಕಾಬೂಲ್‌ನಿಂದ ಅಫ್ಘಾನ್ ಹುಡುಗ ಅಚ್ಚರಿಯ ರೀತಿಯಲ್ಲಿ ದೆಹಲಿಗೆ ಬಂದಿದ್ದಾನೆ. ಸುಮರು 2 ಗಂಟೆಗಳ ಪ್ರಯಾಣದ ನಂತರ ಕೆಎಎಂ ಏರ್‌ಲೈನ್ಸ್ ವಿಮಾನ ಆರ್‌ಕ್ಯೂ -4401 ಇಂದಿರಾ ಗಾಂಧಿ ಅಂತರರಾಷ್ಟ್ರೀಯ (ಐಜಿಐ) ವಿಮಾನ ನಿಲ್ದಾಣವನ್ನು ತಲುಪಿದಾಗ ಈ ಘಟನೆ ವರದಿಯಾಗಿದೆ.



ನಂತರ ಸುಮಾರು 13 ವರ್ಷದ ಹುಡುಗನನ್ನು ಅದೇ ವಿಮಾನದಲ್ಲಿ ಅಫ್ಘಾನಿಸ್ತಾನಕ್ಕೆ ಕಳುಹಿಸಲಾಸಲಾಗಿದೆ ಎಂದು ಮೂಲಗಳು ತಿಳಿಸಿವೆ.ವಿಮಾನ ನಿಲ್ದಾಣದ ಭದ್ರತಾ ನಿಯಂತ್ರಣ ಕೊಠಡಿಗೆ ಬಾಲಕನೊಬ್ಬ ವಿಮಾನ ದಿಂದ ಇಳಿದ ಬಳಿಕ ಅಲೆದಾಡುತ್ತಿ ರುವುದು ಕಂಡುಬಂತು ಎಂದು ವಿಮಾನಯಾನ ಅಧಿಕಾರಿಗಳು ತಿಳಿಸಿದ್ದಾರೆ.

ಅಫ್ಘಾನ್‌ನ ಕುಂಡುಜ್ ನಗರದ ಮೂಲದ ಬಾಲಕನನ್ನು ವಿಮಾನಯಾನ ಸಿಬ್ಬಂದಿ ಬಂಧಿಸಿ ಕೇಂದ್ರ ಕೈಗಾರಿಕಾ ಭದ್ರತಾ ಪಡೆ ಸಿಬ್ಬಂದಿಗೆ ಹಸ್ತಾಂತರಿಸಿದಾಗಅವನನ್ನು ವಿಚಾರಣೆಗಾಗಿ ವಿಮಾನ ನಿಲ್ದಾಣದ ಟರ್ಮಿನಲ್ 3 ಕ್ಕೆ ಕರೆತಂದರು. ತಾನು ಕಾಬೂಲ್ ವಿಮಾನ ನಿಲ್ದಾಣ-ಕ್ಕೆ ನುಸುಳಿದೆ ಮತ್ತು ಹೇಗೋ ಆ ವಿಮಾನದ ಹಿಂಭಾಗದ ಕೇಂದ್ರ ಲ್ಯಾಂಡಿಂಗ್ ಗೇರ್ ವಿಭಾಗ ದೊಳಗೆ ಪ್ರವೇಶಿಸುವಲ್ಲಿ ಯಶಸ್ವಿಯಾಗಿ ದ್ದೇನೆ ಎಂದು ಅವನು ಅಧಿಕಾರಿಗಳಿಗೆ ಹೇಳಿದನು. ವಿಚಾರಣೆ ಮಾಡಿದ ನಂತರ, ಮಧ್ಯಾಹ್ನ 12:30 ರ ಸುಮಾರಿಗೆ ಹೊರಟ ಅದೇ ವಿಮಾನದ ಮೂಲಕ ಅಫ್ಘಾನ್ ಹುಡುಗನನ್ನು ವಾಪಸ್ ಕಳುಹಿಸಲಾಯಿತು ಎಂದು ಅವರು ಹೇಳಿದರು.

ಕೆಎಎಂ ವಿಮಾನಯಾನ ಸಂಸ್ಥೆಯ ಭದ್ರತಾ ಅಧಿಕಾರಿಗಳು ಲ್ಯಾಂಡಿಂಗ್ ಗೇರ್ ವಿಭಾಗದ ಭದ್ರತಾ ಪರಿಶೀಲನೆ ನಡೆಸಿದರು ಮತ್ತು ಆ ಹುಡುಗ ಹೊತ್ತೊಯ್ದಿದ್ದ ಸಣ್ಣ ಕೆಂಪು ಬಣ್ಣದ ಸ್ಪೀಕರ್ ಅನ್ನು ಪತ್ತೆ ಮಾಡಿದ್ದಾರೆ. ಸಂಪೂರ್ಣ ತಪಾಸಣೆ ನಂತರ ವಿಮಾನವನ್ನು ಸುರಕ್ಷಿತವೆಂದು ಘೋಷಿಸಲಾಯಿತು ಎಂದು ಅವರು ಹೇಳಿದರು.

## ಬಿಬಿಎಂಪಿ ಇ-ಖಾತಾ ಯೋಜನೆಗೆ ರಾಷ್ಟ್ರೀಯ

# ಇ-ಖಾತಾ ಆಡಳಿತ ಪ್ರಶಸ್ತಿ 2025




ಬೆಂಗಳೂರು: ರಾಜಧಾನಿ ಬೆಂಗಳೂರಲ್ಲಿ ನಂತರ ರಾಜ್ಯದಲ್ಲಿ ವಿಸ್ತರಣೆ ಆದ್ದ "ಇ-ಖಾತಾ' ಯೋಜನೆಯಡಿ ಸಾಕಷ್ಟು ಬದಲಾಯವಣೆ ತಂದಿತು. ಆಸ್ತಿ, ದಾಖಲೆ ಪತ್ರಗಳನ್ನು ಮಾಲೀಕರಿ ಡಿಜಿಟಲ್ ರೂಪದಲ್ಲಿ, ಆನ್‌ಲೈನ್‌ನಲ್ಲಿ, ಮನೆಯಲ್ಲೇ ಕೂತು ಇ-ಖಾತಾ ಪಡೆಯುವಂತಾಯಿತು. ಜನಸ್ನೇಹಿತ ಬಿಬಿಎಂಪಿ ಇ-ಖಾತಾ ಯೋಜನೆಗೆ ರಾಷ್ಟ್ರೀಯ ಪ್ರಶಸ್ತಿ ದೊರೆತಿದೆ ಎಂದು ಗ್ರೇಟ-ರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ತಿಳಿಸಿದೆ.

ಹೌದು, ಸೆಪ್ಟಂಬರ್ 2ರ ಮೊದಲಿದ್ದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ವ್ಯಾಪ್ತಿಯಲ್ಲಿದ್ದ ಆಸ್ತಿ ಮಾಲೀಕರಿಗಾಗಿ ಇ-ಖಾತಾ ಯೋಜನೆ ಜಾರಿ ತರಲಾಗಿತ್ತು. ಈ ಯೋಜನೆಗೆ ಸೋಮವಾರ (22 ಸೆಪ್ಟೆಂಬರ್ 2025) ವಿಶಾಖಪಟ್ಟಣಂದಲ್ಲಿ ನಡೆದ ಭಾರತ ಸರ್ಕಾರವು 28ನೇ ರಾಷ್ಟ್ರೀಯ ಇ-ಆಡಳಿತ ಪ್ರಶಸ್ತಿ ಸಮಾರಂಭದಲ್ಲಿ "ಬಿಬಿಎಂಪಿಯ ಇ-ಖಾತಾ ಯೋಜನೆಗೆ "ರಾಷ್ಟ್ರೀಯ ಇ-ಆಡಳಿತ ಪ್ರಶಸ್ತಿ 2025" ನೀಡಿ ಗೌರವಿಸಲಾಯಿತು. ಉಪಮುಖ್ಯಮಂತ್ರಿಗಳು ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವರಾದ ಡಿ.ಕೆ. ಶಿವಕುಮಾರ್ ರವರ ಮಹತ್ವಾಕಾಂಕ್ಷಿ ಯೋಜನೆಯಾದ ಇ-ಖಾತಾ ಯೋಜನೆಯು ಆಸ್ತಿಯ ದಾಖಲೆಗಳನ್ನು ಡಿಜಿಟಲೀಕ-ರಿಸುವುದು, ಪಾರದರ್ಶಕತೆಯನ್ನು ಖಾತ್ರಿ ಪಡಿಸುವುದು ಹಾಗೂ ನಾಗರಿಕ ಸೇವಾ ವಿತರಣೆಯನ್ನು ಬಲಪಡಿಸುವಲ್ಲಿ ಮುಂಚೂಣಿಯ ಪಾತ್ರ ವಹಿಸಿದಕ್ಕಾಗಿ ಪ್ರಶಂಸಿಸಲ್ಪಟ್ಟಿದೆ.

Karnataka: ಸಾರಿಗೆ ದರ ನಿಯಂತ್ರಣ ಸಮಿತಿ (PTFRC) ರಚಿಸಿದ ಸರ್ಕಾರ, ಕಾರ್ಯಗಳೇನು? Karnataka: ಸಾರಿಗೆ ದರ ನಿಯಂತ್ರಣ ಸಮಿತಿ (PTFRC) ರಚಿಸಿದ ಸರ್ಕಾರ, ಕಾರ್ಯಗಳೇನು? ಈ ಪ್ರಶಸ್ತಿಯನ್ನು ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿ ನಾಥ್, ಕಂದಾಯ ವಿಭಾಗದ ವಿಶೇಷ ಆಯುಕ್ತರು ಮುನೀಶ್ ಮೌದ್ಗಿಲ್, ಜಂಟಿ ಆಯುಕ್ತರಾದ ಲಕ್ಷ್ಮೀದೇವಿ, ಎನ್.ಐ.ಸಿಯ ಹಿರಿಯ ತಾಂತ್ರಿಕ ನಿರ್ದೇಶಕರಾದ ಸುರೇಶ್ ಬಾಬು ಹಾಗೂ ಇ-ಖಾತಾ ತಂಡವು ಪ್ರಶಸ್ತಿಯನ್ನು ಸ್ವೀಕರಿಸಿದರು. ಈ ಪ್ರಶಸ್ತಿಯನ್ನು ಸಚಿವರು, ಪ್ರಧಾನ ಮಂತ್ರಿ ಕಾರ್ಯಾಲಯದ ರಾಜ್ಯ ಸಚಿವರಾದ ಜಿತೇಂದ್ರ ಸಿಂಗ್ ಅವರಿಂದ ಪ್ರದಾನ ಮಾಡಲಾಯಿತು.

ಇದೇ ವೇಳೆ ಇ-ಆಡಳಿತ ಪ್ರಶಸ್ತಿ ಜೊತೆಗೆ 10 ಲಕ್ಷ ರೂ. ನಗದು ಬಹುಮಾನ ಸಹ ನೀಡಿ ಗೌರವಿಸಲಾಯಿತು ಎಂದು ಜಿಬಿಎ ಪ್ರಕಟಣೆಯಲ್ಲಿ ತಿಳಿಸಿದೆ. ಬೆಂಗಳೂರು ವ್ಯಾಪ್ತಿಯಲ್ಲಿ ಲಕ್ಷಾಂತರ ಆಸ್ತಿಗಳ ದಾಖಲೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ. 25 ಲಕ್ಷದಷ್ಟು ಕರಡು ಅಂತಿಮ ಇ ಖಾತಾಗಳು ಲಭ್ಯವಿವೆ. ಅವುಗಳ ವಿತರಣೆಗೆ ಸರ್ಕಾರ ಅನೇಕ ಅಭಿಯಾನ ಆರಂಭಿಸಿದೆ. ಜಾಗೃತಿ ಸಹ ಮೂಡಿಸಿದೆ. ಈವರೆಗೆ ಸುಮಾರು ಐದರಿಂದ ಏಳು ಲಕ್ಷ ಇ-ಖಾತೆಗಳು ವಿತರಣೆ ಆಗಿವೆ ಎನ್ನಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ವಿತರಣೆ ಮಾಡಲು ಅಧಿಕಾರಿಗಳು ಕಾರ್ಯಪ್ರವೃತ್ತರಾಗಿದ್ದಾರೆ.

# ಕೋಲ್ಕತ್ತಾದಲ್ಲಿ ಎಡಬಿಡದೆ ಸುರಿದ ಮಳೆಗೆ 5 ಮಂದಿ ಸಾವು

ಕೋಲ್ಕತ್ತಾ: ಪಶ್ಚಿಮ ಬಂಗಾಳದ ರಾಜಧಾನಿ ಕೋಲ್ಕತ್ತಾ ಮತ್ತು ಅದರ ಸುತ್ತಮತ್ತಲಿನ ಉಪನಗರಗಳಲ್ಲಿ ಎಡಬಿಡದೆ ಸುರಿಯುತ್ತಿರುವ ಭಾರೀ ಮಳೆಗೆ ಐದು ಜನರು ಸಾವನ್ನಪ್ಪಿ, ಹಲವಾರು ಮಂದಿ ಸಂಕಷ್ಟಕ್ಕೆ ಸಿಲಿಕಿದ್ದಾರೆ. ಕೋಲ್ಕತ್ತಾದ ಬೆನಿಯಾಪುಕುರ್, ಕಾಳಿಕಾಪುರ್, ನೇತಾಜಿನಗರ ಗರಿಯಾಹತ್ ಮತ್ತು ಎಕ್ಬಾಲ್ಪುರದಲ್ಲಿ ಪ್ರತ್ಯೇಕ ಘಟನೆಗಳಲ್ಲಿ ಸಾವುಗಳು ಸಂಭವಿಸಿವೆ.



ನೀರಿನ ಹರಿವು ತೊಂದರೆ ಉಂಟು ಮಾಡಿದೆ. ಜೊತೆಗೆ ಉಪನಗರ ರೈಲು ಮತ್ತು ಮೆಟ್ರೋ ಸೇವೆಗಳಿಗೂ ಅಡ್ಡಿಯಾಗಿದೆ. ನಗರದ ಹಲವಾರು ತಗ್ಗುಪ್ರದೇಶಗಳಲ್ಲಿ ಮಳೆ ನೀರು ಮನೆಗಳಿಗೆ ನುಗ್ಗಿ ಆಸ್ತಿಪಾಸ್ತಿಗೆ ಹಾನಿಯಾಗಿದೆ. ಹಲವಾರು ಶಾಲೆಗಳು ಮಕ್ಕಲಿಗೆ ರಜೆ ಘೋಷಿಸಿವೆ. ನಗರದ ದಕ್ಷಿಣ ಮತ್ತು ಪೂರ್ವ ಭಾಗಗಳಲ್ಲಿ ಮಳೆಯ ತೀವ್ರತೆ ಹೆಚ್ಚಾಗಿದೆ. ಕೋಲ್ಕತ್ತಾ ಮುನ್ಸಿಪಲ್ ಕಾರ್ಪೋರೇಷನ್ ಮಾಹಿತಿಯ ಪ್ರಕಾರ, ಗರಿಯಾ ಕಾಮದಹರಿಯಲ್ಲಿ ಕೆಲವೇ ಗಂಟೆಗಳಲ್ಲಿ 332 ಮಿ.ಮೀ ಮಳೆಯಾಗಿದ್ದು, ಜೋಧಪುರ ಪಾರ್ಕ್‌ನಲ್ಲಿ 285 ಮಿಮೀ, ಕಾಳಿಘಾಟ್‌ನಲ್ಲಿ 280 ಮಿಮೀ, ಟಾಪ್ತಿಯಾದಲ್ಲಿ 275 ಮಿಮೀ ಮತ್ತು ಬ್ಯಾಲಿಗಂಗೆಯಲ್ಲಿ 264 ಮಿಮೀ ಮಳೆಯಾಗಿದೆ. ನಿರಂತರ ಮತ್ತು ಭಾರೀ ಮಳೆಯಿಂದಾಗಿ ಕೋಲ್ಕತ್ತಾಗೆ ಹೋಗುವ ಮತ್ತು ಹೊರಡುವ ವಿಮಾನಗಳ ಮೇಲೆ ಪರಿಣಾಮ ಬೀರಬಹುದು. ವಿಮಾನ ನಿಲ್ದಾಣಕ್ಕೆ ಹೊರಡುವ ಮೊದಲು ಪರಿಸ್ಥಿತಿಯನ್ನು ಪರಿಶೀಲಿಸಿ ಎಂದು ಏರ್ ಇಂಡಿಯಾ ತಿಳಿಸಿದೆ.

ಗುಡುಗು ಸಹಿತ ಭಾರೀ ಮಳೆಯಾಗುವ ನಿರೀಕ್ಷೆಯಿರುವುದರಿಂದ, ವಿಮಾನ ನಿಲ್ದಾಣಕ್ಕೆ ಮತ್ತು ಅಲ್ಲಿಂದ ವಿಮಾನ ಸಂಚಾರ ವಿಳಂಬವಾಗುವ ಮತ್ತು ನಿಧಾನವಾಗುವ ಸಾಧ್ಯತೆಯಿದ್ದು, ಜನರ ಪ್ರಯಾಣವನ್ನು ಸ್ಥಿರವಾಗಿಡಲು ಸಾಧ್ಯವಿರುವ ಎಲ್ಲವನ್ನೂ ಮಾಡುತ್ತಿದ್ದೇವೆ ಎಂದು ಇಂಡಿಗೋ ತಿಳಿಸಿದೆ. ಸೇವೆಗಳಲ್ಲಿ ವ್ಯತ್ಯಯ ರೈಲು ಹಳಿಗಳು ನೀರಿನಿಂದ ತುಂಬಿರುವುದರಿಂದ ನಗರ ಮತ್ತು ಉಪನಗರಗಳಲ್ಲಿ ರೈಲು ಮತ್ತು ಮೆಟ್ರೋ ಸೇವೆಗಳು ವ್ಯತ್ಯಯಗೊಂಡಿವೆ. ಪ್ರಯಾಣಿಕರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು, ಶಾಹಿದ್ ಖುದಿರಾಮ್ ಮತ್ತು ಮೈದಾನ್ ನಿಲ್ದಾಣಗಳ ನಡುವೆ ಬೆಳಿಗ್ಗೆಯಿಂದ ಸೇವೆಗಳನ್ನು ಸ್ಥಗಿತಗೊಳಿಸಲಾಗಿದೆ ಎಂದು ಕೋಲ್ಕತ್ತಾ ಮೆಟ್ರೋ ರೈಲ್ವೆ ವಕ್ತಾರರು ತಿಳಿಸಿದ್ದಾರೆ. ದಕ್ಷಿಣೇಶ್ವರ ಮತ್ತು ಮೈದಾನ ನಿಲ್ದಾಣಗಳ ನಡುವೆ ಮೊಟಕುಗೊಳಿಸಿದ ಸೇವೆಗಳನ್ನು ನಡೆಸಲಾಗುತ್ತಿದೆ.

ಹಳಿಗಳಲ್ಲಿ ನೀರು ನಿಂತ ಕಾರಣ, ಸೀಲ್ದಾ ದಕ್ಷಿಣ ವಿಭಾಗದಲ್ಲಿ ರೈಲು ಸಂಚಾರವನ್ನು ಸ್ಥಗಿತಗೊಳಿಸಲಾಗಿದೆ, ಆದರೆ ಸೀಲ್ದಾ ಉತ್ತರ ಮತ್ತು ಮುಖ್ಯ ವಿಭಾಗಗಳಲ್ಲಿ ಸೇವೆಗಳನ್ನು ನಡೆಸಲಾಗುತ್ತಿದೆ ಎಂದು ಪೂರ್ವ ರೈಲ್ವೆ ಅಧಿಕಾ-ರಿಯೊಬ್ಬರು ತಿಳಿಸಿದ್ದಾರೆ. ಪೂರ್ವ ರೈಲ್ವೆಯ ಹೌರಾ ಮತ್ತು ಕೋಲ್ಕತ್ತಾ ಟರ್ಮಿನಲ್ ನಿಲ್ದಾಣಗಳಿಗೆ ರೈಲು ಸೇವೆಗಳು ಭಾಗಶಃ ವ್ಯತ್ಯಯಗೊಂಡಿವೆ. ಚಿತ್ಪುರ ಯಾರ್ಡ್‌ಲ್ಲಿ ನೀರು ನಿಂತ ಕಾರಣ ವೃತ್ತಾಕಾರದ ರೈಲ್ವೆ ಮಾರ್ಗದಲ್ಲಿ ರೈಲು ಸಂಚಾರವನ್ನು ಸ್ಥಗಿತಗೊಳಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಶಾಲಾಕಾಲೇಜುಗಳಿಗೆ ರಜೆ ಘೋಷಣೆ: ಭಾರೀ ಮಳೆ ಮತ್ತು ರಸ್ತೆಗಳು ಜಲಾವೃತಗೊಂಡ ಹಿನ್ನೆಲೆಯಲ್ಲಿ ಅನೇಕ ಶಾಲೆಗಳಿಗೆ ರಜೆ ಘೋಷಿಸಲಾಗಿದೆ. ಸಾರ್ವಜನಿಕ ಸಾರಿಗೆ ವ್ಯವಸ್ಥೆ ಇಲ್ಲದಿರುವುದು ಮತ್ತು ಸಂಚಾರ ದಟ್ಟಣೆಯಿಂದಾಗಿ ಕಚೇರಿಗೆ ಹೋಗುವವರು ತಮ್ಮ ಸ್ಥಳಗಳನ್ನು ತಲುಪಲು ಕಷ್ಟಪಡುತ್ತಿದ್ದಾರೆ.

# ಕೀಳು ಮಟ್ಟದ ಸಂಸ್ಕೃತಿ ನಮ್ಮದಲ್ಲ ಶಾಸಕ ನಂಜೇಗೌಡ

**ಮಾಲೂರು: ಮಾಜಿ ಶಾಸಕ ಮಂಜುನಾಥಗೌಡ ಅವರು ಮಾತನಾಡಿರುವ ಮಾತುಗಳನ್ನು ನೆನೆದು ಶಾಸಕ ಕೆವೈ ನಂಜೇಗೌಡ ಅವರು ಇಂತಹ ಕೀಳು ಮಟ್ಟದ ಸಂಸ್ಕೃತಿ ನಮ್ಮದಲ್ಲ ಎಂದು ಭಾವುಕರಾ ದರು.**
**ಕಳೆದ 2023 ರ ವಿಧಾನಸಭಾ ಚುನಾವಣೆಯಲ್ಲಿ ಮಾಲೂರು ಕ್ಷೇತ್ರದ ಫಲಿತಾಂಶ ದಲ್ಲಿ ಸಂಶಯವಿದೆ ಮರು ಎಣಿಕೆಯಾಗಬೇಕೆಂದು ಮಾಜಿ ಶಾಸಕ ಮಂಜುನಾಥಗೌಡ ನ್ಯಾಯಾಲಯದ ಮೊರೆಹೋಗಿದ್ದು.**



ಇದೀಗ ಹೈಕೋರ್ಟ್ ಶಾಸಕ ಕೆವೈ ನಂಜೇಗೌಡ ಅವರ ಶಾಸಕ ಸ್ಥಾನವನ್ನು ಅಸಿಂಧುಗೊಳಿಸಿ ಮರು ಎಣಿಕೆಗೆ ಸೂಚಿಸಿದ್ದ ಹಿನ್ನಲೆ ಕ್ಷೇತ್ರದಲ್ಲಿ ಎರಡು ಪಕ್ಷದ ಮುಖಂಡರು ಚರ್ಚೆ ಮಾಡುತ್ತಿದ್ದರು. ಇದರ ಬೆನ್ನಲ್ಲೇ ಬಿಜೆಪಿ ಅಭ್ಯರ್ಥಿ ಕೆಎಸ್ ಮಂಜುನಾಥ್? ಗೌಡ ಅವರು ಮಾಲೂರಿನಲ್ಲಿ ಸೋಮವಾರ ಪತ್ರಿಕಾಗೋಷ್ಠಿ ನಡೆಸಿ ಶಾಸಕ ಕೆವೈ ನಂಜೇಗೌಡ ವಿರುದ್ಧ ಏಕವಚನದಲ್ಲೇ ವಾಗ್ದಾಳಿ ನಡೆಸಿದ್ದರು. ಈ ವಿಚಾರವಾಗಿ ಅವರ ಮಾತುಗಳಿಗೆ ಉತ್ತ–ರಿಸುವ ಸಲುವಾಗಿ ಇಂದು ಪಟ್ಟಣದ ಕಾಂಗ್ರೆಸ್ ಕಛೇರಿಯ ಆವರಣದಲ್ಲಿ ಮಾಲೂರು ಮತ್ತು ಮಾಸ್ತಿ ಬ್ಲಾಕ್ ಕಾಂಗ್ರೆಸ್ ವತಿಯಿಂದ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದರು.

ನೆನ್ನೆ ಮಾಜಿ ಶಾಸಕ ಕೆಎಸ್ ಮಂಜುನಾಥ್ ಗೌಡ ಅವರು ನನ್ನ ಹಾಗೂ ನನ್ನ ಕುಟುಂಬದ ಬಗ್ಗೆ ತುಂಬಾ ಕೆಳಮಟ್ಟದಲ್ಲಿ ಮಾತನಾಡಿದ್ದಾರೆ. ನನಗೆ ದೊಡ್ಡ ಕುಟುಂಬವಿದೆ. ಹೆಣ್ಣು ಮಕ್ಕಳಿದ್ದಾರೆ ಅವರೆಲ್ಲಾ ಈ ಮಾತುಗಳಿಂದ ತುಂಬಾ ನೊಂದಿದ್ದಾರೆ. ಅದಲ್ಲದೆ ನನ್ನ ತಂದೆ, ತಾಯಿಯ ಬಗ್ಗೆ ಮಾತನಾಡಿರುವುದು ನನಗೆ ತುಂಬಾ ನೋವುಂಟು ಮಾಡಿದೆ. ಯಾರೇ ಆಗಲಿ ರಾಜಕೀಯವಾಗಿ ಎದುರಿಸಬೇಕು.

ವಯ್ಯಕ್ತಿಕವಾಗಿ ಮಾತನಾಡುವುದು ಸರಿಯಲ್ಲ ಅವರು ಮಾತನಾಡಿರುವಂತಹ ಕೀಳು ಸಂಸ್ಕೃತಿ ನಮ್ಮದಲ್ಲ ಎಂದು ಬೇಸರ ಹೊರಹಾಕಿದರು. ಇನ್ನೂ ತಾಲ್ಲೂಕಿನಲ್ಲಿ ನಿಮ್ಮನ್ನು ಶಾಸಕರನ್ನಾಗಿ ಮಾಡಿದ ಮೇಲೆ ನಿಮ್ಮ ಅವಧಿಯಲ್ಲಿ ನಡೆದ ಶಾಶ್ವತ ಅಭಿವೃದ್ಧಿ ಕಾಮಗಾ–ರಿಗಳು ಯಾವು. ಸಿಎಸ್ಆರ್ ಅನುದಾನದಲ್ಲಿ ಹೋಂಡಾ ಕ್ರೀಡಾಂಗಣ ಮಾಡಿರುವುದು ಅದು ಬಿಟ್ಟರೆ ದಾನಿಗಳ ಅನುದಾನದಲ್ಲಿ ಶಾದಿ ಮಹಲ್ ದೇವರ ಹುಂಡಿ ಹಣದಲ್ಲಿ ಚಿಕ್ಕತಿರುಪತಿ ಗೋಪುರ ಕಾಮಗಾರಿಗಳು ಪೂರ್ಣಗೊಳಿಸದೆ ಇತ್ತು. ಅದು ನಮ್ಮ ಅವಧಿಯಲ್ಲಿ ಸರ್ಕಾರದಿಂದ ಅನುದಾನಗಳನ್ನು ತಂದು ಪೂರ್ಣಗೊಳಿಸಲಾಗಿದೆ. ಅದು ಬಿಟ್ಟರೆ ತಾಲೂಕಿನಲ್ಲಿ ಅನೇಕ ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿವೆ ಇದನ್ನು ಸಹಿಸಲಾರದೆ ರಾಜಕೀಯವಾಗಿ ಎದುರಿಸಲು ಆಗದೆ. ವೈಯಕ್ತಿಕವಾಗಿ ಈ ರೀತಿ ಕೀಳಾಗಿ ಮಾತನಾಡುವುದು ಮಾಲೂರಿನ ಸಂಸ್ಕೃತಿಯಲ್ಲ. ಇದು ಹೊಸಕೋಟೆ ಸಂಸ್ಕೃತಿ. ನಿಮ್ಮ ಸಂಸ್ಕೃತಿ ಏನೆಂದು ತಾಲ್ಲೂಕಿನ ಜನತೆಗೆ ಈಗಾಗಲೇ ಗೊತ್ತಾಗಿದೆ. ತಾಲ್ಲೂಕಿನ ಯುವಕರನ್ನು ಪ್ರಚೋದನೆಗೊಳಿಸುತ್ತಿರುವುದು ಸರಿಯಲ್ಲ. ಮಾಲೂರಿನಲ್ಲಿ ಎಲ್ಲರೂ ಶಾಂತಿಯಾಗಿ ಜೀವನ ನಡೆಸುತ್ತಿದ್ದಾರೆ. ಮರು ಎಣಿಕೆಯಾದರೂ ನಾವೇ ಗೆಲ್ಲುವುದು. ಮುಂದಿನ ದಿನಗಳಲ್ಲಿ ತಾಲ್ಲೂಕಿನ ಜನತೆ ನಿಮಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಮಾಲೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಲಿಂಗಾಪುರ ಕಿಟ್ಟಿ, ಮಾಸ್ತಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಾಮುಮೂರ್ತಿ, ಪುರಸಭೆ ಅಧ್ಯಕ್ಷ ವಿಜಯಲಕ್ಷ್ಮಿ ಲಕ್ಷ್ಮಿ ನಾರಾಯಣ, ನಿಕಟಪೂರ್ವ ಮಾಸ್ತಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿಜಯನರಸಿಂಹ, ಅಂಜನಿ ಸೋಮಣ್ಣ, ಪಿ ಎಲ್ ಡಿ ಬ್ಯಾಂಕ್ ಅಧ್ಯಕ್ಷ ಬಾಳಿಗಾನಹಳ್ಳಿ ಶ್ರೀನಿವಾಸ್, ಕ್ಷೇತ್ರನಹಳ್ಳಿ ವೆಂಕಟೇಶ್ ಗೌಡ, ಆನೆಪುರ ಹನುಮಂತಪ್ಪ, ಚನ್ನರಾಯಪ್ಪ, ಸುನಿಲ್ ನಂಜೇಗೌಡ, ಫ್ರೆಂಡ್ಸ್ ಸಂತೋಷ್, ಮಾಸ್ತಿ ಚೇತನ್, ಪಿ.ನಾರಾಯಣಸ್ವಾಮಿ, ಎಕೆ ವೆಂಕಟೇಶ್, ನವೀನ್, ವಸಂತ್, ತನ್ವಿರ್ ಅಹಮದ್ ರೋಹಿತ್ ಸೇರಿದಂತೆ ಇನ್ನಿತರರು ಇದ್ದರು.

## ಸಹಕಾರ ಸಂಘದ ಬೆಳವಣಿಗೆಗೆ ಷೇರುದಾರರ ಪಾತ್ರ ಅಗತ್ಯ :ಕೆ.ಎಂ. ಮಹದೇವಸ್ವಾಮಿ

ಗುಂಡ್ಲುಪೇಟೆ: ಸಹಕಾರ ಸಂಘದ ಬೆಳವಣಿಗೆಯಲ್ಲಿ ಷೇರುದಾರರ ಸಹಕಾರ ಬಹುಮುಖ್ಯ ಪಾತ್ರವಹಿಸುತ್ತದೆ ಎಂದು ಅಧ್ಯಕ್ಷ ಕೆ.ಎಂ ಮಹದೇವಸ್ವಾಮಿ ಹೇಳಿದರು.
ತಾಲೂಕಿನ ಕೋಟೆಕೆರೆ ಕೃಷಿಪತ್ತಿನ ಸಹಕಾರ ಸಂಘದ 2024 – 25 ನೇ ಸಾಲಿನ ಸರ್ವ ಸದಸ್ಯರ ಸಭೆಯನ್ನ ಕೆ.ಎಂ ಮಹದೇವಸ್ವಾಮಿ ಅಧ್ಯಕ್ಷತೆಯಲ್ಲಿ ನಡೆಸಲಾಯಿತು. ರೈತರಿಗೆ ಹೆಚ್ಚುವರಿ ಸಾಲ ನೀಡಲು ವಿಳಂಭ ನೀತಿ ಅನುಸರಿಸಲಾಗುತ್ತಿದೆ.

ಹೊಸದಾಗಿ ಸಾಲ ಸೌಲಭ್ಯ ನೀಡುತ್ತಿಲ್ಲ ಅದರ ಜೊತೆಯಲ್ಲೇ ಸಂಘದ ಖರ್ಚಿನ ಪರಿಪೂರ್ಣ ಮಾಹಿತಿಯನ್ನ ನೀಡುವಲ್ಲಿ ನಿರ್ಲಕ್ಷ್ಯವಹಿಸಲಾಗಿದೆ, ರೈತಾಪಿ ವರ್ಗಕ್ಕೆ ಅನುಕೂಲವಾಗುವ ನಿಟ್ಟಿನಲ್ಲಿ ಸಹಕಾರ ಸಂಘದಲ್ಲಿ ಬಿತ್ತನೆ ಬೀಜ, ಗೊಬ್ಬರ ಮತ್ತು ಕ್ರಿಮಿನಾಶಕ ಲಭಿಸುವಂತೆ ವ್ಯವಸ್ಥೆ ರೂಪಿಸಬೇಕು ಎಂದು ರೈತರು ಮನವಿ ಮಾಡಿದರು.
ರೈತರಿಗೆ ಸಕಾಲದಲ್ಲಿ ಸಾಲ ನೀಡುವ ನಿಟ್ಟಿನಲ್ಲಿ ನವೀಕರಣ ಸಕ್ರಿಯಗೊಳಿಸಿ ಮರು ಸಾಲ ನೀಡಲು ಕ್ರಮ ಕೈಗೊಳ್ಳಲಾಗುವುದು ಹಾಗೆಯೇ ರೈತರು ಸಕಾಲದಲ್ಲಿ ಪಡೆದ ಸಾಲವನ್ನ ಮರುಪಾವತಿ ಮಾಡಿದ್ದೆಯಾದಲ್ಲಿ ಸಂಘದ ಬೆಳವಣಿಗೆಗೂ ಸಹಕಾ–ರಿಯಾಗುತ್ತದೆ ಎಂದು ಅಧ್ಯಕ್ಷ ಮಹದೇವಸ್ವಾಮಿ ಸಲಹೆ ನೀಡಿದರು.

ಸಂಘದ ಕಚೇರಿಯಲ್ಲಿಯೇ ಸೇವಾ ಕೇಂದ್ರ ಸವಲತ್ತುಗಳು ದೊರೆಯುವಂತೆ ಕ್ರಮ ಕೈಗೊಳ್ಳಲು ಚಿಂತನೆ ನಡೆಸಲಾಗಿದೆ, ರೈತಾಪಿ ವರ್ಗಕ್ಕೆ ಸಹಾಯವಾಗಲೆಂದೇ ಗೊಬ್ಬರ ಕೀಟನಾಶಕಗಳ ವಿತರಿಸುವ ಕುರಿತು ಸರ್ಕಾರಕ್ಕೆ ಮನದಟ್ಟು ಮಾಡಲಾಗಿದೆ.
ಕ್ಷೇತ್ರದ ಶಾಸಕರಾದ ಎಚ್.ಎಂ.ಗಣೇಶ್ ಪ್ರಸಾದ್ ಅವರು ಸಹಕಾರ ಕ್ಷೇತ್ರದಲ್ಲಿರುವುದರಿಂದ ಉನ್ನತ ಸ್ಥಾನಮಾನ ದೊರೆಯುವ ಭರವಸೆಯಿದ್ದು ಸಹಕಾರ ಸಂಘಗಳ ನ್ನ ಮೇಲ್ಪಂಕ್ತಿಗೆ ಕೊಂಡೊಯ್ಯುವ ನಂಬಿಕೆ ಇದೆ ಎಂದು ತಿಳಿಸಿದರು.
ಸಭೆಯಲ್ಲಿ ಉಪಾಧ್ಯಕ್ಷ ರಾಮಕೃಷ್ಣಯ್ಯ, ನಿರ್ದೇಶಕರಾದ ಗಣೇಶ್, ಸದಾಶಿವಪ್ಪ, ಮಹೇಶ್, ಬಸಪ್ಪದೇವರು, ರಾಮೇಗೌಡ, ಶೇಖರ್, ಹೊಣಕಾರನಾಯ್ಕ, ಶಿವಮ್ಮ, ರತ್ನಮ್ಮ, ಕಾರ್ತಿಕ್, ಸಂಘದ ಸಿಬ್ಬಂದಿಗಳು ಉಪಸ್ಥಿತರಿದ್ದರು.




## ಪಟ್ಟಣದ ಸ್ವಚ್ಛತೆ ಕಾಪಾಡುವಲ್ಲಿ ಪೌರಕಾರ್ಮಿಕರ ಪಾತ್ರ ದೊಡ್ಡದು :ಪುರಸಭಾ ಅಧ್ಯಕ್ಷ ದೀಪು ಶ್ಲಾಘನೆ

ಗುಂಡ್ಲುಪೇಟೆ: ಪಟ್ಟಣವು ಸ್ವಚ್ಛತೆಯಿಂದ ಕೂಡಿರಲು ಪೌರಕಾರ್ಮಿಕರ ಪಾತ್ರ ದೊಡ್ಡದು ಅವರು ನಮ್ಮೆಲ್ಲರ ಸ್ವಚ್ಛತಾ ಸೈನಿಕರು ಎಂದು ನೂತನ ಪುರಸಭಾ ಅಧ್ಯಕ್ಷ ಶಶಿಧರ್ ದೀಪು ಹೇಳಿದರು.

ಪಟ್ಟಣದ ಪುರಸಭಾ ಸಭಾಂಗಣದಲ್ಲಿ ಆಯೋಜಿಸಿದ್ದ ನಗರಾಭಿವೃದ್ಧಿ ಇಲಾಖೆ ಪೌರಾಡಳಿತ ನಿರ್ದೇಶನಾಲಯ ಮತ್ತು ಗುಂಡ್ಲುಪೇಟೆ ಪುರಸಭೆ ವತಿಯಿಂದ ಆಯೋಜಿಸಿದ್ದ ಪೌರಕಾರ್ಮಿಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು, ಪಟ್ಟಣವು ಸ್ವಚ್ಛಂದವಾಗಿ ಕಾಣಲು ಬಹುಮುಖ್ಯ ಕಾರಣ ಪೌರಸೈನಿಕರ ಶ್ರಮವಾಗಿದೆ, ಪಟ್ಟಣದ ಸ್ವಚ್ಛತೆ ಜೊತೆಗೆ ಸಾರ್ವಜನಿಕರ ಆರೋಗ್ಯ ಕಾಪಾಡುವ ಮಹತ್ಕಾರ್ಯವನ್ನ ಇವರು ನಿರ್ವಹಿಸುತ್ತಾರೆ.

ಪ್ರತಿನಿತ್ಯ ಸೂರ್ಯೋದಯಕ್ಕೂ ಮುಂಚಿತವಾಗಿ ತಮ್ಮ ಆರೋಗ್ಯವನ್ನು ಲೆಕ್ಕಿಸದೆ ಬೀದಿಬೀದಿಗಳಲ್ಲಿ ಸ್ವಚ್ಛತಾ ಕೆಲಸಕ್ಕೆ



ತಮ್ಮನ್ನ ತಾವು ತೊಡಗಿಸಿಕೊಳ್ಳುವ ಇವರು ದೇವರಿದ್ದಂತೆ ಎಂದು ಬಣ್ಣಿಸಿದರು.
ಪುರಸಭಾ ಮಾಜಿ ಅಧ್ಯಕ್ಷ ವಿಪಕ್ಷ ನಾಯಕ ಪಿ.ಗಿರೀಶ್ ಮಾತನಾಡಿ ಪುರಸಭಾ ಸ್ವಚ್ಛತಾ ಕಾರ್ಮಿಕರು ದೈವ್ವ ಸ್ವರೂಪಿಗಳು, ಯಾರು ಮಾಡಲಾಗದ ಕೆಲಸವನ್ನ ನೀವು ಮನಃಪೂರ್ವಕವಾಗಿ ನಿರ್ವಹಿಸುತ್ತೀದ್ದೀರಿ , ಪುರಸಭೆ ಸ್ವಚ್ಛತಾ ಪ್ರಗತಿಯಲ್ಲಿ ಪೌರ ಕಾರ್ಮಿಕರೆ ಬಹುಮುಖ್ಯ ಪಾತ್ರವಹಿಸಲಿದ್ದು ನಿಮಗೆ ಹೆಚ್ಚಿನ ಪ್ರಾಶಸ್ತ್ಯ ನೀಡಬೇಕಿದೆ ಎಂದರು.

ಪೌರಕಾರ್ಮಿಕರು ತಮ್ಮ ಮಕ್ಕಳ ವಿದ್ಯಾರ್ಜನೆ ಕಡೆಗೆ ಹೆಚ್ಚಿನ ಗಮನಹರಿಸಬೇಕು, ಸರ್ಕಾರದ ಸವಲತ್ತುಗಳನ್ನು ಸದ್ಬಳಕೆ ಮಾಡಿಕೊಳ್ಳುವ ಮೂಲಕ ಮಕ್ಕಳ ವ್ಯಾಸಂಗಕ್ಕೆ ಪ್ರೋತ್ಸಾಹ ನೀಡಬೇಕು ಎಂದು ಸಲಹೆ ನೀಡಿದರು. ಮುಂಜಾನೆ ಎದ್ದ ತಕ್ಷಣ ಸ್ವಚ್ಛತಾ ಕಾರ್ಯಕ್ಕೆ ಮುಂದಾಗುವ ತಾವೆಲ್ಲ ಪುರಸಭೆಗೆ ಕಳಸವಿದ್ದಂತೆ ಎಂದು ಶ್ಲಾಘಿಸಿದರು.
ಈ ವೇಳೆ ಪುರಸಭಾ ಉಪಾಧ್ಯಕ್ಷ ಶ್ರೀನಿವಾಸ್ ಕಣ್ಣಪ್ಪ, ಮಾಜಿ ಅದ್ಯಕ್ಷ ಮಧುಸೂದನ್, ಮಾಜಿ ಉಪಾಧ್ಯಕ್ಷ ಅಣ್ಣಯ್ಯಸ್ವಾಮಿ, ಸದಸ್ಯರಾದ ಎನ್. ಕುಮಾರ್, ನಿರ್ಮಲ, ನಾಗೇಶ್, ಇಲಿಯಾಸ್, ರಂಗಸ್ವಾಮಿ, ಮಹದೇವಮ್ಮ , ಜಿಲ್ಲಾ ಯೋಜನಾ ನಿರ್ದೇಶಕಿ ಸುಧಾ, ಸಿಓ ಸರವಣ, ಪರಿಸರಾಧಿಕಾರಿ ಮಹೇಶ್, ಮಂಜುನಾಥ್, ಸೇರಿದಂತೆ ಹಲವರು ಇದ್ದರು.

## ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ಸ್ಥಾಪನೆಅಭಿವೃದ್ಧಿಗೆ ಸುವರ್ಣಾವಕಾಶ

### ಪಿ.ಎಮ್.ಎಫ್.ಎಮ್.ಇ ಯೋಜನೆ ಕುರಿತು ಜನರಿಗೆ ಅರಿವು ಮೂಡಿಸಿ: ಎಡಿಸಿ ಸೈಯಿದಾ ಅಯಿಷಾ

ಬೆಂ.ಗ್ರಾ.ಜಿಲ್ಲೆ: ಕಿರು ಆಹಾರ ಸಂಸ್ಕರಣಾ ಘಟಕಗಳು ಸ್ಥಾಪಿಸಲು ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ದಗೊಳಿಸುವಿಕೆ (ಪಿ.ಎಮ್.ಎಫ್.ಎಮ್.ಇ) ಯೋಜನೆ ಅನುಷ್ಠಾನಗೊಳಿಸಿದ್ದು ಸಾರ್ವಜನಿಕರಿಗೆ ಯೋಜನೆಯ ಬಗ್ಗೆ ಅರಿವು ಮೂಡಿಸಿ ಎಂದು ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಸೈಯಿದಾ ಅಯಿಷಾ ಅವರು ತಿಳಿಸಿದರು.

ಕರ್ನಾಟಕ ರಾಜ್ಯ ಕೃಷಿ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕೃಷಿ ಇಲಾಖೆ ಇವರ ಸಹಯೋಗದಲ್ಲಿ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ದಗೊಳಿಸುವಿಕೆ (ಪಿ.ಎಮ್.ಎಫ್. ಎಮ್.ಇ) ಯೋಜನೆ ಅರಿವು ಮೂಡಿಸುವ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು ಜಿಲ್ಲೆಯಲ್ಲಿ ಇಲ್ಲಿಯವರೆಗೂ ಪಿಎಂಎಫ್–




ಎಂಇ ಯೋಜನೆಯಡಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ಸ್ಥಾಪನೆಗೆ ಯೋಜನೆ ಅಡಿಯಲ್ಲಿ ಶೇಕಡ 50 ರಷ್ಟು ಅಥವಾ ಗರಿಷ್ಠ ರೂ 15 ಲಕ್ಷ ಸಹಾಯಧನ ನೀಡಲಾಗುವುದು.

ಜಿಲ್ಲೆಯಲ್ಲಿ 93 ಅರ್ಜಿಗಳು ಬಂದಿದ್ದು, ಹೊಸ ಉದ್ದಿಮೆ ನಡೆಸಲು ಹಿಚ್ಚಿಸುವವರಿಗೆ ಈ ಯೋಜನೆ ಸೂಕ್ತವಾಗಿದೆ. ವೈಯಕ್ತಿಕ ಉದ್ದಿಮೆದಾರರು, ಪಾಲುದಾರಿಕೆ ಸಂಸ್ಥೆಗಳು, ಖಾಸಗಿ ಕಂಪನಿಗಳು, ರೈತ ಉತ್ಪಾದಕ ಸಂಸ್ಥೆಗಳು, ಸ್ವಸಹಾಯ ಸಂಘಗಳು, ಸಹಕಾರಿ ಸಂಘಗಳು ಮತ್ತು ಸರ್ಕಾರೇತರ ಸಂಸ್ಥೆಗಳು ಅರ್ಜಿ ಸಲ್ಲಿಸಬಹುದು. 18 ವರ್ಷ ಮೇಲ್ಪಟ್ಟವರು ಈ ಯೋಜನೆಯನ್ನು ಪಡೆಯಬಹುದು. ಸಿರಿಧಾನ್ಯ ಸಂಸ್ಕರಣೆ, ಬೆಲ್ಲ ಉತ್ಪಾದನೆ, ಎಣ್ಣೆ ಗಾಣಗಳು, ಬೇಕರಿ ಉತ್ಪನ್ನಗಳು ಮಸಾಲೆಪುಡಿ ಘಟಕಗಳು, ಶುಂಠಿ ಸಂಸ್ಕರಣೆ, ತೆಂಗಿನ ಉತ್ಪನ್ನಗಳು, ವಿವಿಧ ಹಣ್ಣು ಮತ್ತು ತರಕಾರಿ ಉತ್ಪನ್ನಗಳು,ಕುಕ್ಕುಟ ಉತ್ಪನ್ನಗಳು ಮತ್ತು ಸಾಗರೋತ್ಪನ್ನಗಳು ಸೇರಿ ಮೌಲ್ಯವರ್ಧಿತ ಉತ್ಪನ್ನಗಳ ತಯಾರಿಕೆಗೆ ಪಿ.ಎಂ.ಎಫ್ .ಎಂ.ಇ ಯೋಜನೆಯಡಿ ಶೇ.50 ಸಹಾಯಧನವಿದೆ.

ಈ ಯೋಜನೆಯಡಿ ಸಲ್ಲಿಸಿದ ಅರ್ಜಿಗಳನ್ನು ಬ್ಯಾಂಕುಗಳು ಶೀಘ್ರವಾಗಿ ವಿಲೇವಾರಿ ಮಾಡಬೇಕು. ಈ ಬಗ್ಗೆ ಲೀಡ್ ಬ್ಯಾಂಕ್ ವ್ಯವಸ್ಥಾಪಕರು ಕ್ರಮ ವಹಿಸಿ. ತಿರಸ್ಕೃತ ಅರ್ಜಿಗಳಿಗೆ ನಿಖರ ಕಾರಣ ನೀಡಿ. ಸಮಸ್ಯೆ ಇದ್ದಲ್ಲಿ ಪರಿಹಾರ ಕಂಡುಕೊಳ್ಳಿ. ಇಲಾಖಾ ಅಧಿಕಾರಿಗಳು ಬ್ಯಾಂಕ್ ಅಧಿಕಾ–ರಿಗಳೊಂದಿಗೆ ಸಮನ್ವಯ ಹೊಂದಿರಬೇಕು. ಆರ್ಥಿಕ ನೆರವು ಪಡೆಯಲು ಸಾರ್ವಜನಿಕರಿಗೆ ಹೆಚ್ಚಿನ ಪ್ರಚಾರ ನೀಡಿ ಅರಿವು ಮೂಡಿಸುವುದರೊಂದಿಗೆ ಯೋಜನೆಯ ಸೌಲಭ್ಯ ಪಡೆದುಕೊಳ್ಳುವಂತಾಗಬೇಕು ಎಂದರು. ಆಸಕ್ತರು ಅರ್ಜಿ ಸಲ್ಲಿಸಲು ಆಯಾ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರ ಕಚೇರಿ, ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳು, ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ (ಕೆಪೆಕ್) ಸಂಸ್ಥೆಯ ಯೋಜನಾ ನಿರ್ವಹಣಾ ಘಟಕ ಅಥ–'ವಾ ದೂರವಾಣಿ ಸಂಖ್ಯೆ 0802271192/93/96/97 ಸಂಪರ್ಕಿಸಬಹುದಾಗಿದೆ.

ಕಾರ್ಯಕ್ರಮದಲ್ಲಿ ಜಂಟಿ ಕೃಷಿ ನಿರ್ದೇಶಕರಾದ ಕಲಾವತಿ, ಉಪ ನಿರ್ದೇಶಕರಾದ ಗಾಯತ್ರಿ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ವಿಠಲ್ ಕಾವ್ಳೆ, ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕರಾದ ಗುಣವಂತ, ರೇಷ್ಮೆ ಇಲಾಖೆಯ ಉಪ ನಿರ್ದೇಶಕರಾದ ಸತೀಶ್, ಲೀಡ್ ಬ್ಯಾಂಕ್ ಮ್ಯಾನೇಜರ್ ರಾಮಾಂಜಿನಯ್ಯ, ಕೃಷಿ ಇಲಾಖೆ, ಕೆಪೆಕ್ ಸಂಸ್ಥೆಯ ಸಿಬ್ಬಂದಿ, ಕಿರು ಉದ್ದಿಮೆದಾರರು ಉಪಸ್ಥಿತರಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.